ಸೃಷ್ಟಿಯಾಗಿರುವ ಹುದ್ದೆಗಳು

1589(1960); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ರಾಜ್ಯದಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನದಿಂದ ಸೃಷ್ಟಿಯಾಗಿರುವ ಉದ್ಯೋಗಗಳ ಸಂಖ್ಯೆ ಎಷ್ಟು; ಇಲ್ಲಿ ಕೆಲಸ ಮಾಡುತ್ತಿರುವವರ ಪೈಕಿ ಎಷ್ಟು ಜನರು ರಾಜ್ಯದವರಾಗಿರುತ್ತಾರೆ ಮತ್ತು ಎಷ್ಟು ಜನರು ಹೊರ ರಾಜ್ಯದವರಾಗಿರುತ್ತಾರೆ;

ಆ) ಈ ಎರಡೂ ಉದ್ದಿಮೆ ತಂತ್ರಜ್ಞಾನದಿಂದ ಎಷ್ಟು ಮೊತ್ತದ ರಫ್ತಾಗುತ್ತದೆ; ಇವುಗಳಿಂದ ರಾಜ್ಯ ಸರ್ಕಾರಕ್ಕೆ ಎಷ್ಟು ಆದಾಯ ಬರುತ್ತದೆ.

ಶ್ರೀ ಎಸ್.ಆರ್. ಪಾಟೀಲ್ (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು)

ಅ) ರಾಜ್ಯದಲ್ಲಿ ಸುಮಾರು 2500 ಮಾಹಿತಿ ತಂತ್ರಜ್ಞಾನ ಕಂಪನಿಗಳು 226 ಜೈವಿಕ ತಂತ್ರಜ್ಞಾನ ಕಂಪನಿಗಳು ಇವೆ. ಮಾಹಿತಿ ತಂತ್ರಜ್ಞಾನದಿಂದ ಸುಮಾರು 9 ಲಕ್ಷ ನೇರ ಉದ್ಯೋಗಗಳು, ಸುಮಾರು 25.00 ಲಕ್ಷ ಪರೋಕ್ಷ ಉದ್ಯೋಗಗಳು ಹಾಗೂ ಜೈವಿಕ ತಂತ್ರಜ್ಞಾನ ಕ್ಷೇತ್ರದಲ್ಲಿ 1.22 ಲಕ್ಷ ಉದ್ಯೋಗಗಳು ಸೃಷ್ಟಿಸಲ್ಪಟ್ಟಿದೆ. ನ್ಯಾಸ್ಕಾಂ ರವರ ವರದಿಯಂತೆ ಶೇ.58 ರಷ್ಟು ಉದ್ಯೋಗಿಗಳು ರಾಜ್ಯದವರಾಗಿರುತ್ತಾರೆ.

ಆ) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ವಲಯಗಳಿಂದ ಅಂದಾಜು ರಫ್ತಿನ ಮೊತ್ತವು ಅನುಕ್ರಮವಾಗಿ ರೂ. 1,80,000/– ಕೋಟಿಗಳು ಮತ್ತು ರೂ. 5,000/– ಕೋಟಿಗಳಾಗಿರುತ್ತವೆ.

ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕಂಪನಿಗಳು ಕಂಪ್ಯೂಟರ್, ಕಂಪ್ಯೂಟರ್ ಪೆರಿಫೆರಲ್ಸ್ ಮತ್ತು ತಂತ್ರಾಂಶಗಳಿಗೆ ಶೇ.5.5ರಷ್ಟು ವ್ಯಾಟ್ (ಮೌಲ್ಯ ವರ್ಧಿತ ತೆರಿಗೆ)ನ್ನು ಪಾವತಿಸುತ್ತದೆ. ಅದಲ್ಲದೆ ಈ ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉದ್ಯೋಗಿಗಳು ವೃತ್ತಿಪರ ತೆರಿಗೆಯನ್ನು ಪಾವತಿಸುತ್ತಾರೆ (ವಾಣಿಜ್ಯ ತೆರಿಗೆ ಇಲಾಖೆಯ ಮಾಹಿತಿಯಂತೆ)

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿ

1590(1961); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯದ ವಿವಿಧ ವಿಧಾನಸಭಾ ಕ್ಷೇತ್ರಗಳಿಗೆ ಬಿಡುಗಡೆ ಮಾಡಲಾಗಿರುವ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಮೊತ್ತ ಎಷ್ಟು (ಕೇತ್ರವಾರು ವಿವರಗಳನ್ನು ಒದಗಿಸುವುದು)?

ಆ) ಈ ಅನುದಾನವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಬಹುದಾಗಿದೆ (ಈ ಮಾರ್ಗಸೂಚಿಯ ಪ್ರತಿಯನ್ನು ಒದಗಿಸುವುದು)

ಇ) ಗ್ರಾಮೀಣ ಪ್ರದೇಶದಲ್ಲಿ ಮಂದಿರಗಳ ಪಕ್ಕದಲ್ಲಿ ಸರ್ಕಾರಿ ಸ್ಥಳ ಲಭ್ಯವಿದ್ದಲ್ಲಿ, ಈ ಅನುದಾನದಿಂದ ಅಲ್ಲಿ ಕಲ್ಯಾಣ ಮಂಟಪವನ್ನು ನಿರ್ಮಿಸಲು ಅವಕಾಶವಿದೆಯೇ?

ಈ) ಒಂದು ವೇಳೆ ನಿಯಮಗಳಲ್ಲಿ ಅವಕಾಶವಿಲ್ಲದೇ ಇದ್ದಲ್ಲಿ, ಸರ್ಕಾರ ಇದನ್ನು ನಿಯಮಗಳಲ್ಲಿ ಸೇರ್ಪಡೆ ಮಾಡಲು ಕ್ರಮ ಕೈಗೊಳ್ಳುವುದೇ?

ಶ್ರೀ ಎಸ್.ಆರ್. ಪಾಟೀಲ್ (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು)